ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು- 560001**

ಸಂಖ್ಯೆ:ಸಿ7[2] ಪ್ರಾಶಿಅ/ಹೊ.ಶಾ.ನೋಂ. 85/2017-18 ದಿನಾಂಕ: 22-05-2018

**ಸುತ್ತೋಲೆ**

ವಿಷಯ: 2018-19ನೇ ಸಾಲಿನಲ್ಲಿ ಹೊಸದಾಗಿ ಶಾಶ್ವತ ಅನುದಾನರಹಿತ ಪೂರ್ವ ಪ್ರಾಥಮಿಕ/ಪ್ರಾಥಮಿಕ/ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ನೋಂದಣಿ ನೀಡುವ ಕುರಿತು.

ಉಲ್ಲೇಖ: 1] ಕರ್ನಾಟಕ ಶಿಕ್ಷಣ ಕಾಯಿದೆ-1983 ಸೆಕ್ಷನ್- 30 ಮತ್ತು 31.

2] ಕರ್ನಾಟಕ ಶಿಕ್ಷಣ ಸಂಸ್ಥೆಗಳು(ವರ್ಗೀಕರಣ ಮತ್ತು ನೋಂದಣಿ) ನಿಯಮಗಳು-1997.

3] ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ-2009.

4] Karnataka Educational Institutions (Classification, Regulation and Prescription of Curricula etc] [Amendment ] Rules 2018.

5] Karnataka Educational Institutions (Classification & Registration] [Amendment ] Rules 2018.

6] ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 26-03-2018

*****************

2018-19ನೇ ಸಾಲಿನ ಖಾಸಗಿ ಅನುದಾನ ರಹಿತ ಪೂರ್ವ ಪ್ರಾಥಮಿಕ, ಪ್ರಾಥಮಿಕ, ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ನೋಂದಣಿ ನೀಡುವ ಕುರಿತು ನೋಂದಾಯಿತ ಅರ್ಹ ಸಂಸ್ಥೆಗಳಿಂದ ಅರ್ಜಿಗಳನ್ನು ಆನ್‌ಲೈನ್ ಮೂಲಕ ಇಲಾಖಾ ವೆಬ್‌ಸೈಟ್‌ನಲ್ಲಿ ಸಲ್ಲಿಸಲು ಉಲ್ಲೇಖ-6ರ ಈ ಕಚೇರಿಯ ಸುತ್ತೋಲೆಯಲ್ಲಿ ಅವಕಾಶ ಕಲ್ಪಿಸಿದ್ದು, ಈಗಾಗಲೇ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಮುಕ್ತಾಯ ಗೊಂಡಿರುತ್ತದೆ.

ಅದರಂತೆ ಆಡಳಿತ ಮಂಡಳಿಯವರು ಈಗಾಗಲೇ ಹೊಸ ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ 942 ಅರ್ಜಿಗಳು ಆನ್‌ಲೈನ್‌ನಲ್ಲಿ ಸ್ವೀಕೃತಿಯಾಗಿರುತ್ತದೆ. 6-8ನೇ ತರಗತಿಗೆ 1016, ಪ್ರೌಢ ಶಾಲೆಗಳಿಗೆ (9-10) ತರಗತಿಗೆ 416, ಹಾಗೂ ಪೂರ್ವ ಪ್ರಾಥಮಿಕದಿಂದ ಪ್ರೌಢ ಶಾಲೆಗಳಿಗೆ 13, ಹಾಗೂ ಪ್ರಾಥಮಿಕದಿಂದ ಪ್ರೌಢ ಶಾಲೆಗಳವರೆಗೆ (1-10) 42, ಅರ್ಜಿಗಳ ಆನ್‌ಲೈನ್‌ನಲ್ಲಿ ಸ್ವೀಕೃತಿಯಾಗಿರುತ್ತವೆ. ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಸ್ವೀಕೃತಿಯಾದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ನೋಂದಣಿಗೆ ಸಂಬಂಧಿಸಿದ ಅರ್ಜಿಗಳನ್ನು 3 ದಿನಗಳೊಳಗೆ ದಿನಾಂಕ: 26.05.2018 ರೊಳಗೆ ಸಂಭಂದ ಪಟ್ಟ ಜಿಲ್ಲಾ ಉಪನಿರ್ದೇಶಕರಿಗೆ ರವಾನಿಸಿ ಮೂಲ ಪ್ರಸ್ತಾವನೆಗಳನ್ನು ಅಗತ್ಯ ದಾಖಲೆಗಳೊಂದಿಗೆ ದೃಢೀಕರಿಸಿ ಸಲ್ಲಿಸುವುದು.

ಪೂರ್ವ ಪ್ರಾಥಮಿಕ ಶಾಲೆಗಳ ನೋಂದಣಿಗೆ ಸಲ್ಲಿಕೆಯಾದ ಪ್ರಸ್ತಾವನೆಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ಉಲ್ಲೇಖ-4 ಮತ್ತು 5ರ ಸರ್ಕಾರದ ಪರಿಷ್ಕೃತ ನಿಯಮಗಳಲ್ಲಿ ಪ್ರಸ್ತಾಪಿಸಲಾಗಿರುವ ಪ್ರತಿ ಅಂಶಗಳನ್ನು ಸ್ಪಷ್ಟವಾಗಿ ಪರಿಶೀಲಿಸಿ ಅರ್ಹ ಪ್ರಸ್ತಾವನೆಗಳಿಗೆ ಅನುಮತಿ ನೀಡುವ ಬಗ್ಗೆ ಸೂಕ್ತ ಕ್ರಮ ವಹಿಸಲು ಸಿದ್ಧಪಡಿಸಿ ಇಟ್ಟುಕೊಳ್ಳುವುದು. ಈ ಕಛೇರಿಯಿಂದ ಆನ್‌ಲೈನ್ ಮೂಲಕ ಪ್ರಸ್ತಾವನೆಗಳನ್ನು ಇತ್ಯರ್ಥ ಪಡಿಸಲು ನಿರ್ದೇಶನ ನೀಡಿದ ನಂತರ ನೋಂದಣಿ ನೀಡುವ ಬಗ್ಗೆ ನಿಯಮಾನುಸಾರ ಕ್ರಮವಹಿಸುವುದು.

1 ರಿಂದ 8ನೇ ತರಗತಿ ಪ್ರಾರಂಭಿಸಲು ಹಾಗೂ 6-8ನೇ ತರಗತಿ ಉನ್ನತೀಕರಿಸಲು ಆನ್‌ಲೈನ್‌ನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಿಂದ ಸ್ವೀಕೃತಿಯಾದ ಪ್ರಸ್ತಾವನೆಗಳನ್ನು ಇತ್ಯರ್ಥಪಡಿಸಲು ಆಯಾ ಜಿಲ್ಲಾ ಉಪನಿರ್ದೇಶಕರುಗಳು ಜಿಲ್ಲಾ ಮಟ್ಟದಲ್ಲಿ ತ್ರಿಸದಸ್ಯ ಸಮಿತಿಯನ್ನು ರಚಿಸಿಕೊಂಡು ಹೊಸದಾಗಿ

Scanned by CamScanner

ಪ್ರಾರಂಭಿಸಲು ಉದ್ದೇಶಿಸಲಾದ ಶಾಲೆಗಳ ಸ್ಥಳ ಪರಿಶೀಲನೆ ಮಾಡಿ, ಉಲ್ಲೇಖ-4 ಮತ್ತು 5ರ ಸರ್ಕಾರದ ಪರಿಷ್ಕೃತ ನಿಯಮಗಳಲ್ಲಿ ಪ್ರಸ್ತಾಪಿಸಲಾಗಿರುವ ಅಂಶಗಳನ್ವಯ ಸ್ಪಷ್ಟವಾಗಿ ಪರಿಶೀಲಿಸಿ ಅರ್ಹ ಪ್ರಸ್ತಾವನೆಗಳಿಗೆ ಅನುಮತಿ ನೀಡುವ ಬಗ್ಗೆ ಸೂಕ್ತ ಕ್ರಮ ವಹಿಸಲು ಸಿದ್ಧಪಡಿಸಿಕೊಂಡು ಕಾಯ್ದಿರಿಸಿಕೊಳ್ಳುವುದು. ಈ ಕಛೇರಿಯಿಂದ ಆನ್‌ಲೈನ್ ಮೂಲಕ ಪ್ರಸ್ತಾವನೆಗಳನ್ನು ಇತ್ಯರ್ಥ ಪಡಿಸಲು ನಿರ್ದೇಶನ ನೀಡಿದ ನಂತರ ಪ್ರಾಧಿಕಾರಿಗಳು ತ್ವರಿತವಾಗಿ ನೋಂದಣಿ ನೀಡುವ ಬಗ್ಗೆ ನಿಯಮಾನುಸಾರ ಕ್ರಮವಹಿಸುವುದು.

ಪೂರ್ವ ಪ್ರಾಥಮಿಕ ತರಗತಿಗಳಿಂದ ಪೌಢಶಾಲೆಗಳ ವರೆಗೆ/ ಪ್ರಾಥಮಿಕ ತರಗತಿಗಳಿಂದ ಪ್ರೌಢಶಾಲೆಗಳ ವರೆಗೆ ಮತ್ತು ಪ್ರೌಢಶಾಲಾ ತರಗತಿಗಳನ್ನು ಪ್ರಾರಂಭಿಸಲು ನೋಂದಣಿ ಕೋರಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಿಂದ ಸ್ವೀಕೃತಿಯಾದ ಪ್ರಸ್ತಾವನೆಗಳನ್ನು ಇತ್ಯರ್ಥಪಡಿಸಲು ಆಯಾ ಜಿಲ್ಲಾ ಉಪನಿರ್ದೇಶಕರುಗಳು ಜಿಲ್ಲಾ ಮಟ್ಟದಲ್ಲಿ ತ್ರಿಸದಸ್ಯ ಸಮಿತಿಯನ್ನು ರಚಿಸಿಕೊಂಡು ಹೊಸದಾಗಿ ಪ್ರಾರಂಭಿಸಲು ಉದ್ದೇಶಿಸಲಾದ ಶಾಲೆಗಳ ಸ್ಥಳ ಪರಿಶೀಲನೆ ಮಾಡಿ, ಉಲ್ಲೇಖ-4 ಮತ್ತು 5ರ ಸರ್ಕಾರದ ಪರಿಷ್ಕೃತ ನಿಯಮಗಳಲ್ಲಿ ಪ್ರಸ್ತಾಪಿಸಲಾಗಿರುವ ಅಂಶಗಳನ್ವಯ ಸ್ಪಷ್ಟವಾಗಿ ಪರಿಶೀಲಿಸಿ ಸಂಬಂಧ ಪಟ್ಟ ಆಯುಕ್ತಾಲಯಗಳಿಗೆ ಪ್ರಸ್ತಾವನೆಗಳನ್ನು ಸಲ್ಲಿಸಲು ಕಾಯ್ದಿರಿಸಿಕೊಳ್ಳುವುದು. ಈ ಕಛೇರಿಯಿಂದ ಆನ್‌ಲೈನ್ ತಂತ್ರಾಂಶದ ಮೂಲಕ ಪ್ರಸ್ತಾವನೆಗಳನ್ನು ಸಲ್ಲಿಸಲು ನಿರ್ದೇಶನ ನೀಡಿದ ನಂತರ ಎಲ್ಲಾ ಪ್ರಸ್ತಾವನೆಗಳನ್ನು ಸಂಬಂಧ ಪಟ್ಟ ಆಯುಕ್ತಾಲಯಗಳಿಗೆ ಸಲ್ಲಿಸಿ ಸ್ವೀಕೃತಿ ಪಡೆಯತಕ್ಕದ್ದು.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ.

**ಪ್ರತಿಯನ್ನು ಮಾಹಿತಿಗಾಗಿ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01.

**ಪ್ರತಿಯನ್ನು ಅಗತ್ಯಕ್ರಮಕ್ಕಾಗಿ:**

1] ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರಗಿ ವಿಭಾಗ ರವರಿಗೆ.
2] ನಿರ್ದೇಶಕರು ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ.
3] ನಿರ್ದೇಶಕರು ಪ್ರಾಥಮಿಕ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ.
4] ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ.
5] ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ.
7] ಕಛೇರಿ ಪ್ರತಿ.

Scanned by CamScanner